**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ: ಪ್ರಾಶಿಅ/ಆರ್.ಟಿ.ಇ/ಪ್ರವೇಶ ಪ್ರಕ್ರಿಯೆ20-21/19-20 ದಿ: 29.8.2020

**:: ಸುತ್ತೋಲೆ ::**

ವಿಷಯ:-2020-21 ನೇ ಸಾಲಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ 2009ರ ಸೆಕ್ಷನ್ 12(1)(ಬಿ) ಮತ್ತು 12(1)(ಸಿ) ಅಡಿ ಅನಾನುಕೂಲ ಪರಿಸ್ಥಿತಿಯಲ್ಲಿರುವ ಹಾಗೂ ದುರ್ಬಲ ವರ್ಗದ ಮಕ್ಕಳ ದಾಖಲಾತಿ ಬಗ್ಗೆ ಪರಿಷ್ಕೃತ ವೇಳಾಪಟ್ಟಿ.

ಉಲ್ಲೇಖ: 1. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ 2009.
2. ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು 2012.
3. ಈ ಕಛೇರಿಯ ಸುತ್ತೋಲೆ ಸಮಸಂಖ್ಯೆ ದಿ: 27.2.2020, 3.7.2020 ಮತ್ತು 21.7.2020

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2020-21ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆಯ ಸೆಕ್ಷನ್ 12(1) (ಬಿ) ಮತ್ತು 12(1)(ಸಿ) ಅಡಿ ಪ್ರವೇಶ ಪ್ರಕ್ರಿಯೆ ಉಲ್ಲೇಖ(3) ರಲ್ಲಿ ನಿಗಧಿಪಡಿಸಿದ ವೇಳಾಪಟ್ಟಿಯಲ್ಲಿ ಬದಲಾವಣೆ ಮಾಡಲಾಗಿದ್ದು ಈ ಕೆಳಗಿನಂತೆ ವೇಳಾಪಟ್ಟಿಯನ್ನು ಪರಿಷ್ಕರಿಸಲಾಗಿದೆ.

2020-21ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆ ಅಡಿ ದಾಖಲಾತಿಗೆ 2ನೇ ಸುತ್ತಿಗೆ ನಿಗಧಿಪಡಿಸಿರುವ ಪರಿಷ್ಕೃತ ವೇಳಾಪಟ್ಟಿ

| ಕ್ರ ಸಂ | ಚಟುವಟಿಕೆ | ದಿನಾಂಕ | ಕ್ರಮ |
|---|---|---|---|
| 1) | ಆನ್ ಲೈನ್ ತಂತ್ರಾಂಶದ ಮೂಲಕ ಎರಡನೇ ಸುತ್ತಿನ ಸೀಟು ಹಂಚಿಕೆ | 1.09.2020 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಎನ್.ಐ.ಸಿ, ಇ-ಆಡಳಿತ ಹಾಗೂ ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್ |
| 2) | ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟುಗಳಿಗೆ ಶಾಲೆಗಳಲ್ಲಿ ದಾಖಲಾತಿ ಅವಧಿ | 01.09.2020 ರಿಂದ 10.09.2020 | ಸಂಬಂಧಿಸಿದ ಪೋಷಕರು, ಶಾಲಾ ಮುಖ್ಯಸ್ಥರು, ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 3) | ಶಾಲೆಗಳಲ್ಲಿ ದಾಖಲಾದ ಎರಡನೇ ಸುತ್ತಿನ ಮಕ್ಕಳ ವಿವರಗಳನ್ನು ತಂತ್ರಾಂಶದಲ್ಲಿ ಅಳವಡಿಸುವುದು | 01.09.2020 ರಿಂದ 10.09.2020 | ಸಂಬಂಧಿಸಿದ ಶಾಲಾ ಮುಖ್ಯಸ್ಥರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು |

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

**ರವರಿಗೆ,**

(1) ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ

(2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು

1. ಹಿರಿಯ ಸಹಾಯಕ ನಿರ್ದೇಶಕರು ಇ. ಆಡಳಿತ ಶಾಖೆ, ಇವರಿಗೆ ಕಳುಹಿಸುತ್ತಾ 2ನೇ ಸುತ್ತಿನ ಲಾಟರಿಗೆ ಸಂಬಂಧಿಸಿದಂತೆ ಪೂರ್ವ ಸಿದ್ಧತೆ ಮಾಡಿಕೊಳ್ಳಲು ಸೂಚಿಸಿದೆ.